# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)2018 |175

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 16-04-2018

## ಹಿಂಬರಹ

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಸಿಆಸುಇ 48 ಸೇನಿಎಫ್ 2014 ಬೆಂಗಳೂರು ದಿನಾಂಕ:14.03.2018ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೈಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3) ಹಾಗೂ ರಿಜಿಸ್ಟ್ರಾರ್ [ಆಡಳಿತ], ಸಾರ್ವಜನಿಕ ಸಂಪರ್ಕಾಧಿಕಾರಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ.ಎಸ್.ಟಿ.(8)ಬಿ ವಿಭಾಗಕ್ಕೆ ಮಾಹಿತಿಗಾಗಿ
7. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

KK 16/4

Sh-est(9) Endsmnt

C. No. 316

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರೂಪ್-ಎ ಮತ್ತು ಬಿ ವೃಂದದ ಸರ್ಕಾರಿ ಅಧಿಕಾರಿಗಳು ಹೊರರೋಗಿಯಾಗಿ ಚಿಕಿತ್ಸೆ ಪಡೆದ ವೈದ್ಯಕೀಯ ವೆಚ್ಚವನ್ನು ಮರುಪಾವತಿಸುವ ಬಗ್ಗೆ.

ಓದಲಾಗಿದೆ: (1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 31 ಎಸ್ಎಂಆರ್ 2014, ದಿನಾಂಕ:05.11.2014.
(2) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 31 ಎಸ್ಎಂಆರ್ 2014, ದಿನಾಂಕ:05.11.2015.
(3) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 5 ಎಸ್ಆರ್‌ಪಿ 1996, ದಿನಾಂಕ:28.12.1996.
(4) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 5 ಎಸ್ಆರ್‌ಪಿ 1996, ದಿನಾಂಕ:15.05.1997.
(5) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 5 ಎಸ್ಆರ್‌ಪಿ 1996, ದಿನಾಂಕ:11.12.1998.
(6) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 38 ಎಸ್ಆರ್‌ಪಿ 2005, ದಿನಾಂಕ:16.07.2005.
(7) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 51 ಎಸ್ಆರ್‌ಪಿ 2007, ದಿನಾಂಕ:29.12.2007.

* * * * *

**ಪ್ರಸ್ತಾವನೆ:**

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರಲ್ಲಿ ನಿಯಮಗಳಲ್ಲಿ ಹೊರರೋಗಿ ಅಥವಾ ಒಳರೋಗಿ ಚಿಕಿತ್ಸೆ ಕುರಿತಂತೆ ವಿವರಗಳನ್ನು ನೀಡಿರುವುದಿಲ್ಲ. ಈ ನಿಯಮಗಳನ್ವಯ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರು ಸರ್ಕಾರಿ ಆಸ್ಪತ್ರೆ/ ಮಾನ್ಯತೆ ಹೊಂದಿದ ಆಸ್ಪತ್ರೆಗಳಲ್ಲಿ ಪಡೆದ ಚಿಕಿತ್ಸೆಯ ವೆಚ್ಚವನ್ನು ಸಿ.ಜಿ.ಹೆಚ್.ಎಸ್. ದರಪಟ್ಟಿಯನ್ವಯ ಮರುಪಾವತಿಸಲು ಅವಕಾಶವಿರುತ್ತದೆ. ಸರ್ಕಾರದ ಮಾನ್ಯತೆ ಪಡೆಯದ ರಾಜ್ಯದ ಹಾಗೂ ಹೊರ ರಾಜ್ಯದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ಪ್ರಕರಣಗಳನ್ನು, ಚಿಕಿತ್ಸೆ ಪಡೆದ ಸಂದರ್ಭ ಮತ್ತು ಸನ್ನಿವೇಶವನ್ನು ಗಣನೆಗೆ ತೆಗೆದುಕೊಂಡು ವಿಶೇಷ ಪ್ರಕರಣವೆಂದು ಪರಿಗಣಿಸಿ, ಮೇಲೆ ಕ್ರಮ ಸಂಖ್ಯೆ (1) ಹಾಗೂ (2)ರಲ್ಲಿ ಓದಲಾದ ದಿನಾಂಕ: 05.11.2014 ಹಾಗೂ ದಿನಾಂಕ: 05.11.2015ರ ಸರ್ಕಾರಿ ಆದೇಶಗಳನ್ವಯ ನಿಯಮ ಸಡಿಲಿಸುವ ಮೂಲಕ ಅರ್ಹ ವೆಚ್ಚವನ್ನು ಮರುಪಾವತಿಸಲು ಅವಕಾಶವಿರುತ್ತದೆ.

ಮೇಲೆ ಕ್ರಮ ಸಂಖ್ಯೆ (3) ರಿಂದ (7)ರಲ್ಲಿ ಓದಲಾದ ಆರ್ಥಿಕ ಇಲಾಖೆಯ ಆದೇಶಗಳಲ್ಲಿ, ಸಮೂಹ 'ಸಿ' ಮತ್ತು 'ಡಿ' ವರ್ಗದ ನೌಕರರಿಗೆ ಟಿ.ಬಿ., ಮಧುಮೇಹ, ಹೃದಯ ತೊಂದರೆ, ರಕ್ತದೊತ್ತಡ, ಕ್ಯಾನ್ಸರ್ ಇತ್ಯಾದಿ ಖಾಯಿಲೆಗಳೊಂದಿಗೆ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರು ನಿರ್ಧರಿಸುವ ಖಾಯಿಲೆಗಳನ್ನು ಹೊರ ರೋಗಿಯಾಗಿ ಚಿಕಿತ್ಸೆ ಪಡೆಯಲು ಗುರುತಿಸಲಾಗಿರುತ್ತದೆ.

...2

46 4/4/19 PS / 1385 (G) A

ಆದರೆ ಗ್ರೂಪ್ 'ಎ' ಮತ್ತು 'ಬಿ' ವರ್ಗದ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಹೊರರೋಗಿಯಾಗಿ ಪಡೆದ ವೈದ್ಯಕೀಯ ಚಿಕಿತ್ಸಾ ವೆಚ್ಚದ ಮರುಪಾವತಿಗೆ ಯಾವುದೇ ಕಾಯಿಲೆಗಳನ್ನು ಗುರುತಿಸದ ಹಿನ್ನೆಲೆಯಲ್ಲಿ, ಗ್ರೂಪ್ 'ಎ' ಮತ್ತು 'ಬಿ' ವರ್ಗದ ಅಧಿಕಾರಿಗಳು ಸರ್ಕಾರಿ ಆಸ್ಪತ್ರೆ ಮತ್ತು ಸರ್ಕಾರದಿಂದ ಮಾನ್ಯತೆ ಹೊಂದಿರುವ ಖಾಸಗಿ ಆಸ್ಪತ್ರೆಗಳಲ್ಲಿ ಹೊರರೋಗಿಯಾಗಿ ಚಿಕಿತ್ಸೆ ಪಡೆದ ಎಲ್ಲಾ ಪ್ರಕರಣಗಳಲ್ಲಿ ಅರ್ಹ ಮೊತ್ತವನ್ನು ಮರುಪಾವತಿ ಮಾಡಲಾಗುತ್ತಿತ್ತು. ಅಲ್ಲದೇ, ಸರ್ಕಾರದಿಂದ ಮಾನ್ಯತೆ ಹೊಂದದೆ ಇರುವ ಖಾಸಗಿ ಆಸ್ಪತ್ರೆಗಳಲ್ಲಿ ಪಡೆಯುವ ಹೊರರೋಗಿ ಚಿಕಿತ್ಸಾ ವೆಚ್ಚವನ್ನು ಪ್ರಕರಣವಾರು ಪರಿಶೀಲಿಸಿ, ನಿಯಮ ಸಡಿಲಿಸುವ ಮೂಲಕ ಅರ್ಹ ಮೊತ್ತವನ್ನು ಮಾತ್ರ ಮರುಪಾವತಿ ಮಾಡಲಾಗುತ್ತಿದ್ದು, ಈ ಬಗ್ಗೆ ಆರ್ಥಿಕ ಇಲಾಖೆಯು ಇತ್ತೀಚಿನ ಪ್ರಕರಣವೊಂದರಲ್ಲಿ ಅವಲೋಕನೆಗಳನ್ನು ಮಾಡಿ, ಅನುಸರಿಸಲಾಗುತ್ತಿರುವ ಈ ಕ್ರಮದ ಬಗ್ಗೆ ಆಕ್ಷೇಪಣೆ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಈ ಬಗ್ಗೆ ಗೊಂದಲಗಳುಂಟಾಗಿರುತ್ತವೆ.

ಆದುದರಿಂದ, ಈ ಸಂಬಂಧದಲ್ಲಿ ದಿನಾಂಕ: 18.01.2018ರಂದು ಸಿ.ಆ.ಸು.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಕರೆಯಲಾಗಿದ್ದ ಸಭೆಯಲ್ಲಿ, ಮೇಲೆ ಕ್ರಮ ಸಂಖ್ಯೆ (3) ರಿಂದ (7) ರಲ್ಲಿ ಓದಲಾದ ಆರ್ಥಿಕ ಇಲಾಖೆಯ ಆದೇಶಗಳಲ್ಲಿ ಗ್ರೂಪ್ 'ಸಿ' ಮತ್ತು 'ಡಿ' ವರ್ಗದ ನೌಕರರುಗಳಿಗೆ ಹೊರರೋಗಿಯಾಗಿ ಪಡೆದ ಚಿಕಿತ್ಸಾ ವೆಚ್ಚದ ಮರುಪಾವತಿಯನ್ನು ಮಾಡಲು ಗುರುತಿಸಿರುವ ದೀರ್ಘಕಾಲಿಕ ಕಾಯಿಲೆಗಳನ್ನು ಹಾಗೂ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರು ನಿರ್ಧರಿಸುವ ದೀರ್ಘಕಾಲಿಕ ಕಾಯಿಲೆಗಳನ್ನು ಗ್ರೂಪ್ "ಎ" ಮತ್ತು "ಬಿ" ವರ್ಗದ ಅಧಿಕಾರಿಗಳ ಚಿಕಿತ್ಸಾ ವೆಚ್ಚದ ಮರುಪಾವತಿಗಾಗಿ ವಿಸ್ತರಿಸಿ ಆದೇಶ ಹೊರಡಿಸಲು ತೀರ್ಮಾನಿಸಲಾಗಿದ್ದು, ಅದರಂತೆ, ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 48 ಸೇನಿಎಫ್ 2014, ಬೆಂಗಳೂರು, ದಿನಾಂಕ:14.03.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963 ರನ್ವಯ ಗ್ರೂಪ್ 'ಸಿ' ಮತ್ತು 'ಡಿ' ವರ್ಗದ ನೌಕರರು ಸರ್ಕಾರಿ ಆಸ್ಪತ್ರೆ ಹಾಗೂ ಸರ್ಕಾರದಿಂದ ಮಾನ್ಯತೆ ಹೊಂದಿರುವ ಆಸ್ಪತ್ರೆಗಳಲ್ಲಿ ಹೊರರೋಗಿಯಾಗಿ ಪಡೆದ ಚಿಕಿತ್ಸೆಯ ವೆಚ್ಚ ಮರುಪಾವತಿ ಸೌಲಭ್ಯಕ್ಕಾಗಿ ಆರ್ಥಿಕ ಇಲಾಖೆಯ ವಿವಿಧ ಆದೇಶಗಳಲ್ಲಿ ಗುರುತಿಸಿರುವ ದೀರ್ಘಕಾಲಿಕ ಕಾಯಿಲೆಗಳನ್ನು (ಅನುಬಂಧ ಲಗತ್ತಿಸಿದೆ) ಹಾಗೂ

ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರು ನಿರ್ಧರಿಸುವ ದೀರ್ಘಕಾಲಿಕ ಕಾಯಿಲೆಗಳನ್ನು, ಗ್ರೂಪ್ "ಎ" ಮತ್ತು "ಬಿ" ವರ್ಗದ ಅಧಿಕಾರಿಗಳ ಹೊರರೋಗಿ ಚಿಕಿತ್ಸೆಯ ವೆಚ್ಚ ಮರುಪಾವತಿ ಸೌಲಭ್ಯಕ್ಕಾಗಿ ವಿಸ್ತರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
14/03/18
(ಎ.ವಿ. ಶೈಲಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2).

ಇವರಿಗೆ:

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಹೊರ ವಲಯ ಮುದ್ರಣಾಲಯ ಯೂನಿಟ್-2, ಮೈಸೂರು ರಸ್ತೆ, ಬೆಂಗಳೂರು- ಇದನ್ನು ಕರ್ನಾಟಕ ರಾಜ್ಯ ಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವಾನಿಯಮಗಳು-2), ಕೊಠಡಿ ಸಂಖ್ಯೆ 30, ವಿಧಾನ ಸೌಧ, ಬೆಂಗಳೂರು-560 001 ಇವರಿಗೆ ಒದಗಿಸಲು **(ಮುಖ ಪತ್ರದೊಂದಿಗೆ)**

ಪ್ರತಿಗಳು:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
7. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ವಿಧಾನ ಸೌಧ, ಬೆಂಗಳೂರು.
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
9. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
10. ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
12. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-9.
13. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-9.
14. ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತ್ರಿ ರಸ್ತೆ, ಬೆಂಗಳೂರು-560 009.
15. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಆಸ್ಪತ್ರೆಗಳ ಜಿಲ್ಲಾ ವೈದ್ಯಾಧಿಕಾರಿಗಳು.
16. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
17. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009.
18. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
19. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
20. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
21. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
22. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
23. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

. . . 4

## ಅನುಬಂಧ

**ಹೊರರೋಗಿ ಚಿಕಿತ್ಸಾ ವೆಚ್ಚ ಮರುಪಾವತಿ ಪಡೆಯಲು ಗುರುತಿಸಿರುವ ದೀರ್ಘಕಾಲಿಕ ರೋಗಗಳು:**

1. ಮಧುಮೇಹ (Diabetes)
2. ರಕ್ತದೊತ್ತಡ (Blood Pressure)
3. ಹೃದ್ರೋಗ
4. ಕ್ಷಯ ರೋಗ
5. ಅಸ್ತಮಾ
6. ಅರ್ಬುದ ರೋಗ (Cancer)
7. ಮೂರ್ಛೆರೋಗ (Epilepsy)
8. ಸಂಧಿವಾತ ರೋಗ (Arthritis)
9. ಪಾರ್ಶ್ವವಾಯು
10. ಜಠರ ಹುಣ್ಣು (Peptic Ulcer)
11. ಅನಿಯಮಿತ ಗರ್ಭಸ್ರಾವ (Dysrunctional Uterine Bleeding)
12. ಮಾನಸಿಕ ಮತ್ತು ನರ ರೋಗಗಳು
13. ದೀರ್ಘಕಾಲಿಕ ಚರ್ಮ ರೋಗ
14. ಸಿಕಲ್‌ಸೆಲ್ ರಕ್ತ ಹೀನತೆ (Sickle cell Anaemia)
15. ದೀರ್ಘಕಾಲಿಕ ಮೂತ್ರಕೋಶದ ಸೋಂಕು (Chronic urinary infection)
16. ದೀರ್ಘಕಾಲಿಕ ಅಮೀಬಿಯಾಸಿಸ್ ( Chronic Amoebiasis)
17. ಮೂತ್ರ ಪಿಂಡ ವೈಫಲ್ಯ
18. ಸೌಂದರ್ಯವರ್ಧಕವಲ್ಲದ/ ಕಾಂತಿವರ್ಧಕವಲ್ಲದ ದಂತ ಚಿಕಿತ್ಸೆ (Non-cosmetic Dental treatment)
19. Osteo Arthritis
20. ಅಧಿಕೃತ ವೈದ್ಯರಿಂದ ದೀರ್ಘಾವಧಿ ಚಿಕಿತ್ಸೆ ಅಗತ್ಯ ಎಂದು ದೃಢೀಕರಿಸಲ್ಪಟ್ಟು, ಅದನ್ನು ನಿರ್ದೇಶಕರು, ಆ.ಕು.ಕ. ಸೇವೆಗಳು ಇವರು ಮೇಲುರುಜು ಮಾಡಿದ ಇತರೆ ಕಾಯಿಲೆಗಳು.

*****